<u>ಕರ್ನಾಟಕ ವಿಧಾನ ಸಭೆ</u>

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 917
2. ಸದಸ್ಯರ ಹೆಸರು : ಶ್ರೀ ಉಮೇಶ್ ವಿಶ್ವನಾಥ್ ಕತ್ತಿ (ಹುಕ್ಕೇರಿ)
3. ಉತ್ತರಿಸಬೇಕಾದ ದಿನಾಂಕ : 13.12.2018.
4. ಉತ್ತರಿಸುವ ಸಚಿವರು : ಮಾನ್ಯ ಜಲ ಸಂಪನ್ಮೂಲ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ)	ಹುಕ್ಕೇರಿ ತಾಲ್ಲೂಕಿನ ಕೊಚರಿ ಬ್ಯಾರೇಜಿನಿಂದ ಅಡವಿ ಸಿದ್ದೇಶ್ವರ ಏತ ನೀರಾವರಿ ಯೋಜನೆ ಮತ್ತು ಸುಲ್ತಾನಪುರ ಬ್ಯಾರೇಜ್‌ನಿಂದ ಶಂಕರಲಿಂಗ ಏತ ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ;	
ಆ)	ಹಾಗಿದ್ದಲ್ಲಿ, ಸದರಿ ಯೋಜನೆಗಳ ಅಂದಾಜು ಮೊತ್ತವೆಷ್ಟು? ಯೋಜನೆಗಳಿಂದ ಎಷ್ಟು ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸಲು ಉದ್ದೇಶಿಸಲಾಗಿದೆ; ಎರಡೂ ಯೋಜನೆಗಳ ಸಂಪೂರ್ಣ ವಿವರಗಳನ್ನು ಒದಗಿಸುವುದು;	ಹುಕ್ಕೇರಿ ತಾಲ್ಲೂಕಿನ ಕೊಚರಿ ಬ್ಯಾರೇಜ್‌ನಿಂದ ಅಡವಿಸಿದ್ದೇಶ್ವರ ಏತ ನೀರಾವರಿ ಯೋಜನೆ ಮತ್ತು ಸುಲ್ತಾನಪೂರ ಬ್ಯಾರೇಜ್‌ನಿಂದ ಶಂಕರಲಿಂಗ ಏತ ನೀರಾವರಿ ಯೋಜನೆಗಳ ಪ್ರಸ್ತಾವನೆಗಳು ನಿಗಮದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.
ಇ)	ಈ ಯೋಜನೆಗಳ ಪ್ರಸ್ತುತಹಂತವೇನು; ಸರ್ಕಾರಯೋಜನೆಗಳಿಗೆ ಅನುಮೋದನೆ ನೀಡಿದೆಯೇ; (ವಿವರ ನೀಡುವುದು)	
ಈ)	ಇಲ್ಲವಾಗಿದ್ದಲ್ಲಿ ಸದರಿ ಯೋಜನೆಗಳ ಅನುಷ್ಠಾನಕ್ಕೆ ಸರ್ಕಾರ ಹಾಕಿಕೊಂಡಿರುವ ಕಾಲಮಿತಿಯೇನು;	

<u>ಸಂಖ್ಯೆ: ಜಸಂಇ 64 ಡಬ್ಲ್ಯೂಎಲ್ಎ 2018</u>

(ಡಿ.ಕೆ.ಶಿವಕುಮಾರ್)
ಜಲ ಸಂಪನ್ಮೂಲ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ:ಜಸಂಇ 60 ಎಂಎಲ್ಎ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:12/12/2018

ಇಂದ:

ಸರ್ಕಾರದ ಕಾರ್ಯದರ್ಶಿಗಳು,
ಜಲಸಂಪನ್ಮೂಲ ಇಲಾಖೆ,
ಬೆಂಗಳೂರು.

ಇವರಿಗೆ:

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ
ಸುವರ್ಣಸೌಧ, ಬೆಳಗಾವಿ.

ಮಾನ್ಯರೆ,

ವಿಷಯ:- ಕರ್ನಾಟಕ ವಿಧಾನ ಸಭೆ ಸದಸ್ಯರಾದ ಡಾ:ಉಮೇಶ್ ಜಿ.ಜಾಧವ್ (ಚಿಂಚೋಳಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1402ಕ್ಕೆ ಉತ್ತರ ನೀಡುವ ಬಗ್ಗೆ.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ವಿಧಾನ ಸಭೆ ಸದಸ್ಯರಾದ ಡಾ:ಉಮೇಶ್ ಜಿ.ಜಾಧವ್ (ಚಿಂಚೋಳಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1402ಕ್ಕೆ ದಿನಾಂಕ:13.12.2018 ರಂದು ಮಾನ್ಯ ಜಲಸಂಪನ್ಮೂಲ ಸಚಿವರು ಉತ್ತರಿಸಬೇಕಾಗಿದ್ದು, ಸದರಿ ಪ್ರಶ್ನೆಗೆ ಉತ್ತರಗಳನ್ನು ಸಿದ್ಧಪಡಿಸಿ 350 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿಕೊಡಲಾಗಿದೆ.

ತಮ್ಮ ವಿಶ್ವಾಸಿ,

(ಬಿ. ಹರಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-5)
ಜಲ ಸಂಪನ್ಮೂಲ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1402
ಸದಸ್ಯರ ಹೆಸರು : ಡಾ:ಉಮೇಶ್ ಜಿ. ಜಾಧವ್ (ಚಿಂಚೋಳಿ)
ಉತ್ತರಿಸುವ ದಿನಾಂಕ : 13-12-2018
ಉತ್ತರಿಸುವ ಸಚಿವರು : ಮಾನ್ಯ ಜಲಸಂಪನ್ಮೂಲ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ಚಿಂಚೋಳಿ ತಾಲ್ಲೂಕಿನ ಕೆಳದಂಡೆ ಮುಲ್ಲಾಮಾರಿ ಯೋಜನೆಗೆ ಹಂಚಿಕೆಯಾದ ನೀರಿನ ಪರಿಮಾಣದಲ್ಲಿ ಹಿನ್ನೀರಿನಲ್ಲಿ 0.5 ಟಿ.ಎಂ.ಸಿ. ನೀರನ್ನು ಏತ ನೀರಾವರಿಗೆ ಮೀಸಲಿರಿಸಿ ಮೂಲ ಯೋಜನೆ ರೂಪಿಸಲಾಗಿದೆಯೇ; ಅದರ ಅಡಿಯಲ್ಲಿ ಐನಾಪೂರ ಏತ ನೀರಾವರಿ ಪ್ರಸ್ತಾಪಿಸಿದ್ದು ಪ್ರಸ್ತುತ ಹಂತದ ವಿವರ ಒದಗಿಸುವುದು;	ಕರ್ನಾಟಕ ನೀರಾವರಿ ನಿಗಮದಡಿ ಬರುವ ಕಲಬುರಗಿ ಯೋಜನಾ ವಲಯದಡಿ ಚಿಂಚೋಳಿ ತಾಲ್ಲೂಕಿನ ಕೆಳದಂಡೆ ಮುಲ್ಲಾಮಾರಿ ಯೋಜನೆಗೆ ಪೂರ್ವದಲ್ಲಿ ಹಂಚಿಕೆಯಾದ 3.08ಟಿ.ಎಂ.ಸಿ. ನೀರಿನಲ್ಲಿ ಏತ ನೀರಾವರಿ ಯೋಜನೆಗೆ 0.5 ಟಿ.ಎಂ.ಸಿ. ಮೀಸಲಾಗಿರುತ್ತದೆ. ಆದರೆ ನಂತರದಲ್ಲಿ ನೀರಿನ ಲಭ್ಯತೆಯ ಅನುಗುಣವಾಗಿ ಸದರಿ ಯೋಜನೆಗೆ ಮರು ಹಂಚಿಕೆಯಾದ 2.61 ಟಿ.ಎಂ.ಸಿ. ನೀರಿನಲ್ಲಿ ಏತ ನೀರಾವರಿಗೆಂದು ಯಾವುದೇ ನೀರಿನ ಹಂಚಿಕೆಯಾಗಿರುವುದಿಲ್ಲ. ನೀರಿನ ಲಭ್ಯತೆ / ಹಂಚಿಕೆಗಳನ್ನು ಆಧರಿಸಿ, ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು.
ಆ.	ಕಳೆದ ಮೂರು ವರ್ಷಗಳ ಬಳಕೆ ಆಧಾರದಲ್ಲಿ ಏತ ನೀರಾವರಿ ಯೋಜನೆಯನ್ನು ಅನುಮೋದಿಸಲು ಕ್ರಮ ಕೈಗೊಳ್ಳಲಾಗುವುದೇ?	

ಸಂಖ್ಯೆ: ಜಸಂಇ 60 ಎಂಎಲ್ಎ 2018

[ಡಿ.ಕೆ. ಶಿವಕುಮಾರ್]
ಜಲ ಸಂಪನ್ಮೂಲ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ:ಜಸಂಇ 63 ಎಂಎಲ್ಎ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:12/12/2018

246
U/S
13/12/18

ಇಂದ:

ಸರ್ಕಾರದ ಕಾರ್ಯದರ್ಶಿಗಳು,
ಜಲಸಂಪನ್ಮೂಲ ಇಲಾಖೆ,
ಬೆಂಗಳೂರು.

ಇವರಿಗೆ:

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ
ಸುವರ್ಣಸೌಧ, ಬೆಳಗಾವಿ.

ಮಾನ್ಯರೆ,

ವಿಷಯ:- ಕರ್ನಾಟಕ ವಿಧಾನ ಸಭೆ ಸದಸ್ಯರಾದ ಶ್ರೀ ಬಸವನಗೌಡ ದದ್ದಲ್ (ರಾಯಚೂರು ಗ್ರಾಮಾಂತರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1388ಕ್ಕೆ ಉತ್ತರ ನೀಡುವ ಬಗ್ಗೆ.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ವಿಧಾನ ಸಭೆ ಸದಸ್ಯರಾದ ಶ್ರೀ ಬಸವನಗೌಡ ದದ್ದಲ್ (ರಾಯಚೂರು ಗ್ರಾಮಾಂತರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1388ಕ್ಕೆ ದಿನಾಂಕ:13.12.2018 ರಂದು ಮಾನ್ಯ ಜಲಸಂಪನ್ಮೂಲ ಸಚಿವರು ಉತ್ತರಿಸಬೇಕಾಗಿದ್ದು, ಸದರಿ ಪ್ರಶ್ನೆಗೆ ಉತ್ತರಗಳನ್ನು ಸಿದ್ದಪಡಿಸಿ 350 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿಕೊಡಲಾಗಿದೆ.

ತಮ್ಮ ವಿಶ್ವಾಸಿ,
14/12/18
(ಬಿ. ಹರಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-5)
ಜಲ ಸಂಪನ್ಮೂಲ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1388
ಸದಸ್ಯರ ಹೆಸರು	:	ಶ್ರೀ.ಬಸವನಗೌಡ ದದ್ದಲ್ (ರಾಯಚೂರು ಗ್ರಾಮಾಂತರ)
ಉತ್ತರಿಸುವ ದಿನಾಂಕ	:	13.12.2018
ಉತ್ತರಿಸುವ ಸಚಿವರು	:	ಮಾನ್ಯ ಜಲಸಂಪನ್ಮೂಲ ಸಚಿವರು.

ಕ್ರ. ಸಂ.	ಪ್ರಶ್ನೆಗಳು	ಉತ್ತರಗಳು
ಅ)	ರಾಯಚೂರು ಗ್ರಾಮೀಣ ಕ್ಷೇತ್ರದ ಚಿಕ್ಕಮಂಚಾಲಿ ಗ್ರಾಮದ ಹತ್ತಿರ ಪಂಚಮುಖಿ ಆಂಜನೇಯ ಮತ್ತು ಮಂತ್ರಾಲಯ ರಾಘವೇಂದ್ರ ಶ್ರೀಗಳ ಪುಣ್ಯಕ್ಷೇತ್ರಕ್ಕೆ ಜೋಡಿಸುವ ಬ್ರಿಡ್ಜ್ ಕಂ ಬ್ಯಾರೇಜ್‌ನ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ: ಇದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು:	ಸದರಿ ಪ್ರಸ್ತಾವನೆಯು ನಿಗಮದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.
ಆ)	ಸದರಿ ಕಾಮಗಾರಿಗಳಗೆ ತಗಲುವ ವೆಚ್ಚ ಹಾಗೂ ಅಂದಾಜು ವೆಚ್ಚವೆಷ್ಟು (ಮಾಹಿತಿ ಒದಗಿಸುವುದು)?	

ಜಸಂಇ 63 ಎಂ.ಎಲ್.ಎ 2018

(ಡಿ.ಕೆ.ಶಿವಕುಮಾರ್)
ಜಲಸಂಪನ್ಮೂಲ ಸಚಿವರು.

ಕರ್ನಾಟಕ ಸರ್ಕಾರ

ಸಂಖ್ಯೆ:ಜಸಂಇ 62 ಡಬ್ಲ್ಯೂಬಿಎಂ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:12/12/2018

ಇಂದ:

ಸರ್ಕಾರದ ಕಾರ್ಯದರ್ಶಿಗಳು,
ಜಲಸಂಪನ್ಮೂಲ ಇಲಾಖೆ,
ಬೆಂಗಳೂರು.

58
U/S
13/12/18

ಇವರಿಗೆ:

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ
ಸುವರ್ಣಸೌಧ, ಬೆಳಗಾವಿ.

ಮಾನ್ಯರೆ,

ವಿಷಯ:- ಕರ್ನಾಟಕ ವಿಧಾನ ಸಭೆ ಸದಸ್ಯರಾದ ಶ್ರೀ ಸಿ.ಎಂ. ನಿಂಬಣ್ಣನವರ್ (ಕಲಘಟಗಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 303ಕ್ಕೆ ಉತ್ತರ ನೀಡುವ ಬಗ್ಗೆ.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ವಿಧಾನ ಸಭೆ ಸದಸ್ಯರಾದ ಶ್ರೀ ಸಿ.ಎಂ. ನಿಂಬಣ್ಣನವರ್ (ಕಲಘಟಗಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 303ಕ್ಕೆ ದಿನಾಂಕ:13.12.2018 ರಂದು ಮಾನ್ಯ ಜಲಸಂಪನ್ಮೂಲ ಸಚಿವರು ಉತ್ತರಿಸಬೇಕಾಗಿದ್ದು, ಸದರಿ ಪ್ರಶ್ನೆಗೆ ಉತ್ತರಗಳನ್ನು ಸಿದ್ದಪಡಿಸಿ 350 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿಕೊಡಲಾಗಿದೆ.

ತಮ್ಮ ವಿಶ್ವಾಸಿ,
12/12/18
(ಬಿ. ಹರಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-5)
ಜಲ ಸಂಪನ್ಮೂಲ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 303
ಸದಸ್ಯರ ಹೆಸರು : ಶ್ರೀ ಸಿ.ಎಂ. ನಿಂಬಣ್ಣನವರ್ (ಕಲಘಟಗಿ)
ಉತ್ತರಿಸುವ ದಿನಾಂಕ : 13.12.2018
ಉತ್ತರಿಸುವ ಸಚಿವರು : ಜಲ ಸಂಪನ್ಮೂಲ ಸಚಿವರು

ಕ್ರಮ ಸಂಖ್ಯೆ:	ಪ್ರಶ್ನೆ	ಉತ್ತರ
ಅ)	2017-18 ನೇ ಸಾಲಿನಲ್ಲಿ ಧಾರವಾಡ ಜಿಲ್ಲೆ ಕಲಘಟಗಿ ತಾಲ್ಲೂಕಿನ 35 ಸಣ್ಣ ನೀರಾವರಿ ಕೆರೆಗಳನ್ನು ಬೇಡ್ತಿ ನಾಲಾದಿಂದ ಏತ ನೀರಾವರಿ ಮೂಲಕ ತುಂಬಿಸುವ ಯೋಜನೆ ಕಾಮಗಾರಿಗೆ ರೂ. 122.19 ಲಕ್ಷ ಮೊತ್ತದ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ದೊರೆತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು
ಆ)	ಕಾಮಗಾರಿ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದಕ್ಕೆ ಕಾರಣವೇನು;	ಸದರಿ ಕಾಮಗಾರಿಯ ಕುಂಠಿತ ಪ್ರಗತಿಯ ಕುರಿತು ಗುತ್ತಿಗೆದಾರರೊಂದಿಗೆ ಚರ್ಚಿಸಿ, ಸದರಿ ಕಾಮಗಾರಿಯನ್ನು ನಿಗದಿತ ಸಮಯದ ಒಳಗಡೆ ಅಂದರೆ ದಿ:31.01.2020ರ ಪೂರ್ವದಲ್ಲಿಯೇ ಪೂರ್ಣಗೊಳಿಸಲು ಗುತ್ತಿಗೆದಾರರಿಗೆ ಸೂಚಿಸಲಾಗಿರುತ್ತದೆ. ಇದಕ್ಕೆ ಸಂಬಂಧಿಸಿದಂತೆ ವಿವಿಧ ಹಂತದ ಚಟುವಟಿಕೆಗಳ ಪರಿಷ್ಕೃತ ಬಾರ್‌ಚಾರ್ಟನ್ನು ಗುತ್ತಿಗೆದಾರರಿಂದ ಪಡೆಯಲಾಗಿದ್ದು, ಗುತ್ತಿಗೆದಾರರು ಟೆಂಡರ್ ಅವಧಿಯ ಒಳಗಡೆ ಅಂದರೆ ದಿ:31.01.2020 ಒಳಗಾಗಿ ಪೂರ್ಣಗೊಳಿಸಲು ಒಪ್ಪಿಕೊಂಡಿರುತ್ತಾರೆ. ಈಗಾಗಲೇ ಗುತ್ತಿಗೆದಾರರು ಕಾಮಗಾರಿಯ ಅನುಷ್ಠಾನಕ್ಕೆ ಅವಶ್ಯಕವಿರುವ ಸರ್ವೆ ಕಾರ್ಯಕೈಗೊಂಡು ರೈಸಿಂಗ ಮೇನ್, ಹೈಡ್ರೋ-ಮೆಕ್ಯಾನಿಕಲ್ ಕೆಲಸಗಳಿಗೆ ಸಂಬಂಧಿಸಿದ ವಿನ್ಯಾಸ ಹಾಗೂ ನಕ್ಷೆಗಳಿಗೆ ಅನುಮೋದನೆ ನೀಡುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.
ಇ)	ಅಮೃತ ಕನ್ಸಸ್ಟ್ರಕ್ಷನ್ ಪ್ರೈ.ಲಿ. ಕಂಪನಿಗೆ ಕಾಮಗಾರಿ ಒಪ್ಪಂದ ಪತ್ರ ನೀಡಲಾಗಿದೆಯೇ?	ಹೌದು

ಸಂಖ್ಯೆ: ಜಸಂಇ 62 ಡಬ್ಲ್ಯೂಬಿಎಂ 2018

(ಡಿ.ಕೆ. ಶಿವಕುಮಾರ್)
ಜಲ ಸಂಪನ್ಮೂಲ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ:ಜಸಂಇ 201 ಸಿಎಂ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:12/12/2018

97 U/S 13/12/18

ಇಂದ:

ಸರ್ಕಾರದ ಕಾರ್ಯದರ್ಶಿಗಳು,
ಜಲಸಂಪನ್ಮೂಲ ಇಲಾಖೆ,
ಬೆಂಗಳೂರು.

ಇವರಿಗೆ:

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನಸಭೆ
ಸುವರ್ಣಸೌಧ, ಬೆಳಗಾವಿ.

ಮಾನ್ಯರೆ,

ವಿಷಯ:- ಕರ್ನಾಟಕ ವಿಧಾನ ಸಭೆ ಸದಸ್ಯರಾದ ಶ್ರೀ ಗೂಳಿಹಟ್ಟಿ ಡಿ. ಶೇಖರ್ (ಹೊಸದುರ್ಗ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 58ಕ್ಕೆ ಉತ್ತರ ನೀಡುವ ಬಗ್ಗೆ.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ವಿಧಾನ ಸಭೆ ಸದಸ್ಯರಾದ ಶ್ರೀ ಗೂಳಿಹಟ್ಟಿ ಡಿ. ಶೇಖರ್ (ಹೊಸದುರ್ಗ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 58ಕ್ಕೆ ದಿನಾಂಕ:13.12.2018 ರಂದು ಮಾನ್ಯ ಜಲಸಂಪನ್ಮೂಲ ಸಚಿವರು ಉತ್ತರಿಸಬೇಕಾಗಿದ್ದು, ಸದರಿ ಪ್ರಶ್ನೆಗೆ ಉತ್ತರಗಳನ್ನು ಸಿದ್ದಪಡಿಸಿ 350 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿಕೊಡಲಾಗಿದೆ.

ತಮ್ಮ ವಿಶ್ವಾಸಿ,
12/12/18
(ಬಿ. ಹರಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-5)
ಜಲ ಸಂಪನ್ಮೂಲ ಇಲಾಖೆ

ಕರ್ನಾಟಕ ವಿಧಾನ ಸಭೆ

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	58
2	ಸದಸ್ಯರ ಹೆಸರು	:	ಶ್ರೀ. ಗೂಳಿಹಟ್ಟಿ ಡಿ ಶೇಖರ್ (ಹೊಸದುರ್ಗ)
3	ಉತ್ತರಿಸುವ ಸಚಿವರು	:	ಜಲ ಸಂಪನ್ಮೂಲ ಸಚಿವರು
4	ಉತ್ತರಿಸಬೇಕಾದ ದಿನಾಂಕ	:	13-12-2018

ಕ್ರ ಸಂ	ಪ್ರಶ್ನೆಗಳು	ಉತ್ತರಗಳು
ಅ	ಹೊಸದುರ್ಗ ತಾಲ್ಲೂಕು ವಾಣಿವಿಲಾಸ ಹಿನ್ನೀರು ಮುಳುಗಡೆ ಪ್ರದೇಶದಲ್ಲಿ ಬೇವಿನಹಳ್ಳಿ ಎರಡು ಗುಡ್ಡದ ಮಧ್ಯೆ ಮಾಡದಕೆರೆ, ಮತ್ತೋಡು, ಶ್ರೀರಾಂಪುರ 3 ಹೋಬಳಿಗಳ ಸಂಪರ್ಕ ಸೇತುವೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ನಬಾರ್ಡ್ ಅಥವಾ ಬೇರೆ ಅನುದಾನಲ್ಲಿ ಕೈಗೊಳ್ಳಲಾಗಿದೆಯೇ; ಅಥವಾ ಇಲ್ಲವೇ (ಮಾಹಿತಿ ಒದಗಿಸುವುದು)	ಹೊಸದುರ್ಗ ತಾಲ್ಲೂಕು ವಾಣಿವಿಲಾಸ ಹಿನ್ನೀರು ಮುಳುಗಡೆ ಪ್ರದೇಶದಲ್ಲಿ ಬೇವಿನಹಳ್ಳಿ ಎರಡುಗುಡ್ಡದ ಮಧ್ಯೆ ಮಾಡದಕೆರೆ, ಮತ್ತೋಡು, ಶ್ರೀರಾಂಪುರ 3 ಹೋಬಳಿಗಳ ಸಂಪರ್ಕ ಸೇತುವೆ ಕಾಮಗಾರಿಯ ಕಾರ್ಯಸಾಧ್ಯತೆ ಮತ್ತು ಸೂಕ್ತತೆ ಬಗ್ಗೆ ವಿಶ್ವೇಶ್ವರಯ್ಯ ಜಲ ನಿಗಮದ ಹಂತದಲ್ಲಿ ಪರಿಶೀಲನೆಯಲ್ಲಿದೆ.
ಆ	ಇಲ್ಲವಾದಲ್ಲಿ ಇದಕ್ಕೆ ಕಾರಣವೇನು (ಮಾಹಿತಿ ಒದಗಿಸುವುದು)?	

ಜಸಂಇ:201:ಸಿಎಂ:2018

(ಡಿ.ಕೆ. ಶಿವಕುಮಾರ)
ಜಲ ಸಂಪನ್ಮೂಲ ಸಚಿವರು

ಕರ್ನಾಟಕ ಸರ್ಕಾರ

ಸಂ: ಗ್ರಾಅಪ/233/10/ಆರ್‌ಆರ್‌ಸಿ/2018

ಕರ್ನಾಟಕ ಸರ್ಕಾರದ ಸಚಿವಾಲಯ
ಸುವರ್ಣ ಸೌಧ,
ಬೆಳಗಾವಿ, ದಿನಾಂಕ: 10.12.2018.

ಇಂದ,
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ

ಇವರಿಗೆ,
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಪರಿಷತ್ತು
ಸುವರ್ಣ ಸೌಧ ಬೆಳಗಾವಿ.

U/S
13/12/18

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ವಿಶ್ವನಾಥ ಚಂದ್ರಶೇಖರ ಮಾಮನಿ (ಸವದತ್ತಿ ಯಲ್ಲಮ್ಮ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 1396 ಕ್ಕೆ ಉತ್ತರವನ್ನು ಒದಗಿಸುವ ಕುರಿತು.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ವಿಶ್ವನಾಥ ಚಂದ್ರಶೇಖರ ಮಾಮನಿ (ಸವದತ್ತಿ ಯಲ್ಲಮ್ಮ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 1396 ಕ್ಕೆ ಉತ್ತರಗಳನ್ನು (350 ಪ್ರತಿಗಳನ್ನು) ಇದರೊಂದಿಗೆ ಲಗತ್ತಿಸಿ ತಮಗೆ ಕಳುಹಿಸಲು ನಿರ್ದೇಶಿತನಾಗಿರುತ್ತೇನೆ.

ತಮ್ಮ ವಿಶ್ವಾಸಿ,

11/12/18
(ಡಿ.ಎಸ್.ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ
(ಸೇವೆಗಳು ಬಿ & ಸಿ)

ಪ್ರತಿಯನ್ನು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ ಗ್ರಾಮೀಣಾವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ
3) ಸರ್ಕಾರದ ಅಧೀನ ಕಾರ್ಯದರ್ಶಿ ಸೇವೆಗಳು ಎ ಹಾಗೂ ಸಮನ್ವಯ ಶಾಖೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1396
ಸದಸ್ಯರ ಹೆಸರು	ಶ್ರೀ ವಿಶ್ವನಾಥ ಚಂದ್ರಶೇಖರ ಮಾಮನಿ (ಸವದತ್ತಿ ಯಲ್ಲಮ್ಮ)
ಉತ್ತರಿಸಬೇಕಾದ ದಿನಾಂಕ	13.12.2018

ಕ್ರಸಂ	ಪ್ರಶ್ನೆಗಳು	ಉತ್ತರ
ಅ.	ಸವದತ್ತಿ ಯಲ್ಲಮ್ಮಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸತ್ತಿಗೇರಿ – ಕುರುಬಗಟ್ಟಿ 4 ಕಿ.ಮೀ. ರಸ್ತೆಯು ಭಾರಿ ವಾಹನಗಳ ಸಂಚಾರದಿಂದ ಪೂರ್ತಿಯಾಗಿ ಹಾಳಾಗಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಬಂದಿದೆ
ಆ.	ಸದರಿ ರಸ್ತೆಯನ್ನು ಅಭಿವೃದ್ಧಿಪಡಿಸಲು ಸರ್ಕಾರ ಕ್ರಮ ಕೈಗೊಂಡಿದೆಯೆ;	• ಸವದತ್ತಿ ತಾಲೂಕಿನ ಸತ್ತಿಗೇರಿ ಕುರುಬಗಟ್ಟಿ ರಸ್ತೆಯ (ವಿ.ಆರ್.ನಂ–26) ಭಾರೀ ವಾಹನಗಳ ಸಂಚಾರದಿಂದಾಗಿ ಪೂರ್ತಿಯಾಗಿ ಹಾಳಾಗಿರುತ್ತದೆ ಹಾಗೂ • ಸತ್ತಿಗೇರಿ – ಕುರುಬಗಟ್ಟಿ ರಸ್ತೆಯು ಗಣಿಗಾರಿಕೆಯಿಂದ ಭಾದಿತ ರಸ್ತೆಯಾಗಿದ್ದು, • ಈ ರಸ್ತೆಯ ಅಭಿವೃದ್ಧಿಗಾಗಿ ರೂ. 60.00 ಲಕ್ಷಕ್ಕೆ ಗಣಿ ಬಾಧಿತ ಪ್ರದೇಶದ ಅಭಿವೃದ್ಧಿಯ ಅನುದಾನಕ್ಕೆ ಕ್ರಿಯಾ ಯೋಜನೆ ತಯಾರಿಸಿ ಸ್ಥಳೀಯ ಗಣಿ ಮತ್ತು ಭೂವಿಜ್ಞಾನ ಇಲಾಖೆ, ಬೆಳಗಾವಿ ಇವರಿಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಆದರೆ ಈ ರಸ್ತೆಯನ್ನು ಪರಿಗಣಿಸಲಾಗಿರುವುದಿಲ್ಲ.
ಇ	ಹಾಗಿದ್ದಲ್ಲಿ, ಸದರಿ ರಸ್ತೆಯನ್ನು ಯಾವ ಕಾಲಮಿತಿಯೊಳಗೆ ಅನುದಾನ ಬಿಡುಗಡೆ ಮಾಡಿ ಅಭಿವೃದ್ಧಿ ಪಡಿಸಲಾಗುವುದು? (ವಿವರ ನೀಡುವುದು)	ಸದರಿ ರಸ್ತೆಯನ್ನು ಆದ್ಯತೆಯನ್ನಾಧರಿಸಿ ಜಿಲ್ಲಾ ಪಂಚಾಯಿತಿಗೆ ಹಂಚಿಕೆ ಮಾಡುವ ಅನುದಾನದ ಲಭ್ಯತೆಯನ್ನಾಧರಿಸಿ ಅಭಿವೃದ್ಧಿಪಡಿಸಬೇಕಿದೆ.

ಕಡತ ಸಂಖ್ಯೆ: ಗ್ರಾಅಪ:233/10:ಆರ್‌ಆರ್‌ಸಿ:18

(ಕೃಷ್ಣ ಬೈರೇಗೌಡ)
ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್, ಕಾನೂನು,
ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವರು

ಕರ್ನಾಟಕ ಸರ್ಕಾರ

ಸಂ: ಗ್ರಾಅಪ/ 495 / ಅಪಾಂಸಅ / 2018

ಕರ್ನಾಟಕ ಸರ್ಕಾರದ ಸಚಿವಾಲಯ
ಸುವರ್ಣ ಸೌಧ,
ಬೆಳಗಾವಿ, ದಿನಾಂಕ 10.12.2018.

ಇಂದ,
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ

ಇವರಿಗೆ,
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ
ಸುವರ್ಣ ಸೌಧ ಬೆಳಗಾವಿ.

ವಿಷಯ: ಮಾನ್ಯ ವಿಧಾನಸಭೆ ಸದಸ್ಯರಾದ ಶ್ರೀ ಬಾಲಚಂದ್ರ ಲಕ್ಷ್ಮಣ್‌ರಾವ್ ಜಾರಕಿಹೊಳಿ (ಅರಭಾವಿ) ಇವರ ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂ: 915 ಕ್ಕೆ ಉತ್ತರವನ್ನು ಒದಗಿಸುವ ಕುರಿತು.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನಸಭೆ ಸದಸ್ಯರಾದ ಶ್ರೀ ಬಾಲಚಂದ್ರ ಲಕ್ಷ್ಮಣ್‌ರಾವ್ ಜಾರಕಿಹೊಳಿ (ಅರಭಾವಿ) ಇವರ ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂ: 915 ಕ್ಕೆ ಉತ್ತರಗಳನ್ನು (350 ಪ್ರತಿಗಳನ್ನು) ಇದರೊಂದಿಗೆ ಲಗತ್ತಿಸಿ ತಮಗೆ ಕಳುಹಿಸಲು ನಿರ್ದೇಶಿತನಾಗಿರುತ್ತೇನೆ.

ತಮ್ಮ ವಿಶ್ವಾಸಿ,
10/12/18
(ಡಿ.ಎಸ್.ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ
(ಸೇವೆಗಳು ಬಿ & ಸಿ)

ಪ್ರತಿಯನ್ನು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ
3) ಸರ್ಕಾರದ ಅಧೀನ ಕಾರ್ಯದರ್ಶಿ ಸೇವೆಗಳು ಎ ಹಾಗೂ ಸಮನ್ವಯ ಶಾಖೆ.

ಕರ್ನಾಟಕ ವಿಧಾನ ಸಭೆ

1. ಸದಸ್ಯರ ಹೆಸರು : ಶ್ರೀ ಬಾಲಚಂದ್ರ ಲಕ್ಷ್ಮಣರಾವ್ ಜಾರಕಿಹೊಳಿ (ಅರಭಾವಿ)
2. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 915
3. ಉತ್ತರಿಸಬೇಕಾದ ದಿನಾಂಕ : 13–12–2018

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	2017–18ನೇ ಸಾಲಿನಲ್ಲಿ ಅರಭಾವಿ ಮತಕ್ಷೇತ್ರಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಡಿಯಲ್ಲಿ ಬರುವ 'ನಮ್ಮ ಹೊಲ ನಮ್ಮ ರಸ್ತೆ' ಯೋಜನೆಯಡಿ ಕಾಮಗಾರಿಗಳು ಪೂರ್ಣಗೊಂಡಿದ್ದರೂ ಸಹ ಈ ಯೋಜನೆಯ ಕಾಮಗಾರಿಗಳಿಗೆ ಹಣ ಬಿಡುಗಡೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಮಹಾತ್ಮಗಾಂಧಿ ನರೇಗಾ ಯೋಜನೆಯಡಿ 2017-18ನೇ ಸಾಲಿನಲ್ಲಿ ಅರಭಾವಿ ಮತಕ್ಷೇತ್ರದಲ್ಲಿ ಬರುವ 34 ಗ್ರಾಮ ಪಂಚಾಯತಿಗಳಲ್ಲಿ 'ನಮ್ಮ ಹೊಲ ನಮ್ಮ ರಸ್ತೆ' ಕಾರ್ಯಕ್ರಮದಡಿ ಪ್ರಾರಂಭವಾಗಿದ್ದ 128 ಕಾಮಗಾರಿಗಳ ಪೈಕಿ 101 ಕಾಮಗಾರಿಗಳು ಪೂರ್ಣಗೊಂಡಿದ್ದು, ರೂ.219.41 ಲಕ್ಷಗಳ ವೆಚ್ಚ ಪಾವತಿಸಲಾಗಿದೆ. ಪೂರ್ಣಗೊಂಡಿರುವ ಎಲ್ಲ ಕಾಮಗಾರಿಗಳಿಗೆ ವೆಚ್ಚ ಪಾವತಿಸಲಾಗಿದ್ದು, ಬಾಕಿ ಇರುವುದಿಲ್ಲ.
ಆ)	ಹಾಗಿದ್ದಲ್ಲಿ, ಯಾವಾಗ ಹಣ ಬಿಡುಗಡೆ ಮಾಡಲಾಗುವುದು; ಕಾಮಗಾರಿಗಳು ಪೂರ್ಣಗೊಂಡಿದ್ದರೂ ಸಹ ಹಣ ಬಿಡುಗಡೆ ಮಾಡದಿರಲು ಸರ್ಕಾರಕ್ಕೆ ಇರುವ ತೊಂದರೆಗಳೇನು;	ಉದ್ಭವಿಸುವುದಿಲ್ಲ.
ಇ)	ಹಾಗಿದ್ದಲ್ಲಿ, ಯಾವಾಗ ಹಣ ಬಿಡುಗಡೆ ಮಾಡಲಾಗುವುದು?	ಉದ್ಭವಿಸುವುದಿಲ್ಲ.

ಸಂಖ್ಯೆ: ಗ್ರಾಅಪ 495 ಉಖಾಯೋ 2018

(ಕೃಷ್ಣ ಬೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕರ್ನಾಟಕ ಸರ್ಕಾರ

ಸಂ: ಗ್ರಾಅಪ/ 77 ಜೆಪಿಪ್ರಂ 2018

ಕರ್ನಾಟಕ ಸರ್ಕಾರದ ಸಚಿವಾಲಯ
ಸುವರ್ಣ ಸೌಧ,
ಬೆಳಗಾವಿ, ದಿನಾಂಕ: 10 .12.2018.

ಇಂದ,
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಗ್ರಾಮಿಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ

ಇವರಿಗೆ,
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ
ಸುವರ್ಣ ಸೌಧ ಬೆಳಗಾವಿ.

ವಿಷಯ: ಮಾನ್ಯ ವಿಧಾನಸಭೆ ಸದಸ್ಯರಾದ ಶ್ರೀ ಕೆ. ಶಿವನಗೌಡ (ನಾಯಕ್) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 978 ಕ್ಕೆ ಉತ್ತರವನ್ನು ಒದಗಿಸುವ ಕುರಿತು.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನಸಭೆ ಸದಸ್ಯರಾದ ಶ್ರೀ ಕೆ. ಶಿವನಗೌಡ (ನಾಯಕ್) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 978 ಕ್ಕೆ ಉತ್ತರಗಳನ್ನು (350 ಪ್ರತಿಗಳನ್ನು) ಇದರೊಂದಿಗೆ ಲಗತ್ತಿಸಿ ತಮಗೆ ಕಳುಹಿಸಲು ನಿರ್ದೇಶಿತನಾಗಿರುತ್ತೇನೆ.

ತಮ್ಮ ವಿಶ್ವಾಸಿ,
10/12/18
(ಬಿ.ಎಸ್. ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮಿಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ
(ಸೇವೆಗಳು ಬಿ & ಸಿ)

ಪ್ರತಿಯನ್ನು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ ಗ್ರಾಮೀಣಾವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ
3) ಸರ್ಕಾರದ ಅಧೀನ ಕಾರ್ಯದರ್ಶಿ ಸೇವೆಗಳು ಎ ಹಾಗೂ ಸಮನ್ವಯ ಶಾಖೆ.

ಕರ್ನಾಟಕ ವಿಧಾನ ಸಭೆ

ಸದಸ್ಯರ ಹೆಸರು : ಶ್ರೀ ಡಾ: ಕೆ. ಅನ್ನದಾನಿ (ಮಳವಳ್ಳಿ)
ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 978
ಉತ್ತರಿಸುವ ದಿನಾಂಕ : 13.12.2018.

ಕ್ರ.ಸಂ	ವಿಷಯ	ಉತ್ತರ
(ಅ)	ಮಳವಳ್ಳಿ ತಾ: ಹುಸ್ಕೂರು ಗ್ರಾಮ ಪಂ. ಕೇಂದ್ರವಾಗಿದ್ದು, ಇಲ್ಲಿ ಹೆಚ್ಚಾಗಿ ಪರಿಶಿಷ್ಟ ಜಾತಿಯವರು ವಾಸವಾಗಿದ್ದು ಇಲ್ಲಿನ ಬೀದಿಗಳಿಗೆ ಸೌರಬೆಳಕು ಯೋಜನೆಯಡಿ ಸೋಲಾರ್ ಲೈಟ್ ಅಳವಡಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ;	ಇಲ್ಲ.
(ಆ)	ಹಾಗಿದ್ದಲ್ಲಿ, ಎಷ್ಟು ಕಾಲಮಿತಿಯೊಳಗೆ ಸೋಲಾರ್ ಲೈಟ್ ಅಳವಡಿಸಲಾಗುವುದು?	ಅನ್ವಯಿಸುವುದಿಲ್ಲ.

ಕಡತ ಸಂಖ್ಯೆ: ಗ್ರಾಅಪ 77 ಜೈಅಯೋ 2018. ಬೆಂಗಳೂರು, ದಿನಾಂಕ.07.12.2018.

(ಶ್ರೀ ಕೃಷ್ಣ ಬೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್,
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವರು.

ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 23 ಎಲ್ಎಕ್ಯೂ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:11.12.2018

ಇಂದ
ಸರ್ಕಾರದ ಕಾರ್ಯದರ್ಶಿಗಳು,
ನಗರಾಭಿವೃದ್ಧಿ ಇಲಾಖೆ,
ವಿಕಾಸ ಸೌಧ,
ಬೆಂಗಳೂರು.

112
U/S
13/12/18

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ,
ಸುವರ್ಣ ವಿಧಾನ ಸೌಧ,
ಬೆಳಗಾವಿ.

ಮಾನ್ಯರೆ,

ವಿಷಯಃ ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಜೆ.ಸಿ.ಮಾಧುಸ್ವಾಮಿ (ಚಿಕ್ಕನಾಯಕನಹಳ್ಳಿ) ರವರು ಕೇಳಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:229 ಕ್ಕೆ ಉತ್ತರಿಸುವ ಬಗ್ಗೆ.

~ * * * * * * * * * * ~

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಜೆ.ಸಿ.ಮಾಧುಸ್ವಾಮಿ (ಚಿಕ್ಕನಾಯಕನಹಳ್ಳಿ) ರವರು ಕೇಳಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:229 ಕ್ಕೆ ಉತ್ತರವನ್ನು ತಯಾರಿಸಿದ್ದು, ಇದರ 350 ಪ್ರತಿಗಳನ್ನು ಇದರೊಂದಿಗೆ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

11/12/18

(ಪಂಪನಗೌಡ ಮೇಲ್ಸೀಮೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	229
ಸದಸ್ಯರ ಹೆಸರು	:	ಶ್ರೀ ಜೆ.ಸಿ.ಮಾಧುಸ್ವಾಮಿ(ಚಿಕ್ಕನಾಯಕನಹಳ್ಳಿ)
ಉತ್ತರಿಸುವ ದಿನಾಂಕ	:	13/12/2018
ಉತ್ತರಿಸುವ ಸಚಿವರು	:	ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಚಿಕ್ಕನಾಯಕನಹಳ್ಳಿ ತಾಲ್ಲೂಕು ಹುಳಿಯಾರು ಪಟ್ಟಣ ಪಂಚಾಯತಿಯಾಗಿ ಘೋಷಣೆ ಮಾಡಿರುವುದು ಸರ್ಕಾರದ ಗಮನದಲ್ಲಿದೆಯೇ?	ಹೌದು. ಸರ್ಕಾರದ ಅಧಿಸೂಚನೆ ಸಂ:ನಅಇ 159 ಎಂಎಲ್‌ಆರ್ 2015, ದಿ:23.02.2018 ರನ್ವಯ ಪಟ್ಟಣ ಪಂಚಾಯತಿಯಾಗಿ ಘೋಷಣೆ ಮಾಡಲಾಗಿದೆ.
(ಆ)	ಹಾಗಿದ್ದಲ್ಲಿ, ಪಂಚಾಯತಿಯ ಚುನಾಯಿತ ಸದಸ್ಯರ ಉಳಿಕೆ ಅವಧಿಯ ಸ್ಥಾನವೇನು?	ಕರ್ನಾಟಕ ಪುರಸಭೆಗಳ ಅಧಿನಿಯಮ 1964 ರ ಕಲಂ 357(ಖ) ರನ್ವಯ ಗ್ರಾಮ ಪಂಚಾಯತಿಯ ಸದಸ್ಯರಾಗಿ ಪದವನ್ನು ತೆರವು ಮಾಡುವ ವ್ಯಕ್ತಿಗಳನ್ನೊಳಗೊಂಡ ಮಧ್ಯಕಾಲಿಕ ಕೌನ್ಸಿಲನ್ನು ರಚಿಸಲ್ಪಡುವುದು ಮತ್ತು ಆ ಗ್ರಾಮ ಪಂಚಾಯತಿ ಮತ್ತು ಗ್ರಾಮ ಪಂಚಾಯತಿಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರನ್ನು ಮಧ್ಯಕಾಲೀನ ಮುನ್ಸಿಪಲ್ ಕೌನ್ಸಿಲನ್ನು ಅನುಕ್ರಮವಾಗಿ ಅಧ್ಯಕ್ಷರು ಮತ್ತು ಉಪಾಧ್ಯಕ್ಷನೆಂಬುದಾಗಿ ಭಾವಿಸಲ್ಪಡುವುದು. ಕಲಂ 358(1) ರನ್ವಯ ಮಧ್ಯಕಾಲೀನ ಮುನ್ಸಿಪಲ್ ಕೌನ್ಸಿಲ ರಚಿಸಲ್ಪಟ್ಟ ದಿನಾಂಕದಿಂದ ಆರು ತಿಂಗಳುಗಳನ್ನು ಮೀರಿದ ಅವಧಿಯೊಳಗೆ ಹೊಸ ಮುನ್ಸಿಪಲ್ ಕೌನ್ಸಿಲಿನ ಕೌನ್ಸಿಲರುಗಳ ಸಂಖ್ಯೆಯನ್ನು ಮತ್ತು ಅದಕ್ಕಾಗಿ ಚುನಾವಣೆ ನಡೆಸುವ ಕಾರ್ಯವನ್ನು ಕೈಗೊಳ್ಳಲಾಗುವುದು. ಕಲಂ 358(2) ರನ್ವಯ ಮಧ್ಯಕಾಲೀನ ಮುನ್ಸಿಪಲ್ ಕೌನ್ಸಿಲಿನ ಕೌನ್ಸಿಲರುಗಳು ಹೊಸ ಮುನ್ಸಿಪಲ್ ಕೌನ್ಸಿಲಿನ ಮೊದಲ ಸಭೆಯ ದಿನಾಂಕದ ನಿಕಟ ಪೂರ್ವದ ದಿನಾಂಕದವರೆಗೆ ಪದಧಾರಣೆಯಲ್ಲಿ ಇರುತ್ತಾರೆ.
(ಇ)	ಈ ಪಟ್ಟಣ ಪಂಚಾಯತಿಗೆ ಪೌರಾಡಳಿತ ಇಲಾಖೆಯ ಅಧಿಕಾರಿಗಳು ನಿಯೋಜನೆಗೊಂಡಿರುವುದರಿಂದ ಗ್ರಾಮ ಪಂಚಾಯಿತಿ ಆಗಿದ್ದಾಗ ನಿಗದಿ ಮಾಡಿದ ಅನುದಾನವನ್ನು ಯಾರು ಖರ್ಚು ಮಾಡಲು ತೀರ್ಮಾನಿಸಲಾಗಿದೆ.	ಕರ್ನಾಟಕ ಪುರಸಭೆಗಳ ಅಧಿನಿಯಮ 1964 ರ ಕಲಂ 357(ಗ) ರನ್ವಯ ಅಧಿಸೂಚನೆಗೆ ಮುಂಚೆ ನಿಹಿತವಾದ ಗ್ರಾಮ ಪಂಚಾಯಿತಿ ನಿಧಿಯ ವೆಚ್ಚ ಮಾಡದೆ ಉಳಿದಿರುವ ಶಿಲ್ಕು ಮತ್ತು ಪಂಚಾಯಿತಿಗೆ ಸೇರಿದ ಸ್ವತ್ತು (ದರಗಳು, ತೆರಿಗೆಗಳು ಹಾಗೂ ಫೀಜುಗಳು ಬಾಕಿಗಳನ್ನೊಳಗೊಂಡು) ಮತ್ತು ಎಲ್ಲಾ ಹಕ್ಕುಗಳು ಹಾಗೂ ಅಧಿಕಾರಗಳು, ಅವುಗಳಿಗೆ ಸಂಬಂಧಿಸಿದ ಎಲ್ಲಾ ಋಣಭಾರಗಳು ಹಾಗೂ ಹೊಣೆಗಾರಿಕೆಗಳಿಗೊಳಪಟ್ಟು, ಹೊಸ ಮುನ್ಸಿಪಲ್ ಕೌನ್ಸಿಲನ್ನು ರಚಿಸುವವರೆಗೆ ಮಧ್ಯಕಾಲೀನ ಮುನ್ಸಿಪಲ್ ಕೌನ್ಸಿಲ್‌ನಲ್ಲಿ ಪೌರಸಭಾ ನಿಧಿಯಾಗಿ ನಿಹಿತವಾಗುತ್ತದೆ.

(ಈ)	ಈಗಾಗಲೇ ಗ್ರಾಮೀಣ ಅಭಿವೃದ್ಧಿ ಇಲಾಖೆಯಿಂದ ಮಂಜೂರಾಗಿ ಪಂಚಾಯಿತಿಯ Action plan ಮಾಡಿರುವ ಹಣವನ್ನು ಖರ್ಚು ಮಾಡಲು ಅವಕಾಶ ಕಲ್ಪಿಸಲಾಗುವುದೇ?	ಕರ್ನಾಟಕ ಪುರಸಭೆಗಳ ಅಧಿನಿಯಮ 1964 ರ ಕಲಂ 357(ಫ) ರನ್ವಯ ಅಧಿಸೂಚನೆ ಹೊರಡಿಸಿದ ಸ್ಥಳೀಯ ಪ್ರದೇಶಕ್ಕೆ ಸಂಬಂಧಿಸಿದಂತೆ ಸದರಿ ದಿನಾಂಕದಿಂದ ನಿಕಟ ಪೂರ್ವದಲ್ಲಿ (1993 ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದ) ಮೇರೆಗೆ ಮಾಡಿದ, ಹೊರಡಿಸಿದ, ವಿಧಿಸಿದ ಅಥವಾ ಮಂಜೂರು ಮಾಡಿದ ಯಾವುದೇ ನೇಮಕಾತಿ, ಅಧಿಸೂಚನೆ, ನೋಟಿಸು, ತೆರಿಗೆ, ಆದೇಶ, ಯೋಜನೆ, ಲೈಸೆನ್ಸು, ಅನುಮತಿ, ನಿಯಮ, ಉಪವಿಧಿ ಅಥವಾ ನಮೂನೆಯು ಜಾರಿಯಲ್ಲಿರುವುದು ಮುಂದುವರೆಯುವುದು ಮತ್ತು (ಚಿಕ್ಕ ನಗರ ಪ್ರದೇಶಕ್ಕೆ) ಸಂಬಂಧಿಸಿದಂತೆ ಈ ಅಧಿನಿಯಮದ ಮೇರೆಗೆ ಮಾಡಿದೆ, ಹೊರಡಿಸಿದ, ವಿಧಿಸಿದ ಅಥವಾ ಮಂಜೂರು ಮಾಡಿದ ಯಾವುದೇ ನೇಮಕಾತಿ, ಅಧಿಸೂಚನೆ, ನೋಟಿಸು, ತೆರಿಗೆ, ಆದೇಶ, ಯೋಜನೆ, ಲೈಸೆನ್ಸು, ಅನುಮತಿ, ನಿಯಮ ಉಪವಿಧಿಯ ಮೂಲಕ ರದ್ದುಪಡಿಸುವ ಅಥವಾ ಮಾರ್ಪಾಟು ಮಾಡುವವರೆಗೆ ಮಾಡಲಾಗಿದೆ, ಹೊರಡಿಸಲಾಗಿದೆ, ವಿಧಿಸಲಾಗಿದೆ ಅಥವಾ ಮಂಜೂರು ಮಾಡಲಾಗಿದೆಯೆಂದು ಭಾವಿಸಲ್ಪಡುವುದು. ಆದ್ದರಿಂದ ಗ್ರಾಮ ಪಂಚಾಯಿತಿಯಿಂದ ಮೇಲ್ದರ್ಜೆಗೇರಿಸಲಾದ ಹುಳಿಯಾರು ಪಟ್ಟಣ ಪಂಚಾಯಿತಿಯಲ್ಲಿ ಕರ್ನಾಟಕ ಪುರಸಭೆಗಳ ಅಧಿನಿಯಮ 1964 ರ ಕಲಂ 357(ಫ) ರನ್ವಯ ಈಗಾಗಲೇ ಗ್ರಾಮೀಣ ಅಭಿವೃದ್ಧಿ ಇಲಾಖೆಯಿಂದ ಮಂಜೂರಾಗಿ ಪಂಚಾಯಿತಿಯ Action plan ಮಾಡಿರುವ ಹಣವನ್ನು ಖರ್ಚು ಮಾಡಲು ಅವಕಾಶವಿರುತ್ತದೆ.

ಸಂಖ್ಯೆ: ನಅಇ 23 ಎಲ್‌ಎಕ್ಯೂ 2018

(ರಮೇಶ ಲ. ಜಾರಕಿಹೊಳಿ)
ಪೌರಾಡಳಿತ, ಬಂದರು ಮತ್ತು ಒಳನಾಡು
ಜಲಸಾರಿಗೆ ಸಚಿವರು

ಕರ್ನಾಟಕ ಸರ್ಕಾರ

ಸಂ: ಗ್ರಾಅಪ/76/ಗ್ರಾನೀಸ(3)/2018

ಕರ್ನಾಟಕ ಸರ್ಕಾರದ ಸಚಿವಾಲಯ
ಸುವರ್ಣ ಸೌಧ,
ಬೆಳಗಾವಿ, ದಿನಾಂಕ: 11.12.2018.

ಇಂದ,
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ

ಇವರಿಗೆ,
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ,
ಸುವರ್ಣ ಸೌಧ ಬೆಳಗಾವಿ.

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಅಮರೇಗೌಡ ಲಿಂಗನಗೌಡ ಪಾಟೀಲ್ ಬಯ್ಯಾಪುರ್ (ಕುಷ್ಟಗಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 449 ಕ್ಕೆ ಉತ್ತರವನ್ನು ಒದಗಿಸುವ ಕುರಿತು.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ಅಮರೇಗೌಡ ಲಿಂಗನಗೌಡ ಪಾಟೀಲ್ ಬಯ್ಯಾಪುರ್ (ಕುಷ್ಟಗಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 449 ಕ್ಕೆ ಉತ್ತರಗಳನ್ನು (350 ಪ್ರತಿಗಳನ್ನು) ಇದರೊಂದಿಗೆ ಲಗತ್ತಿಸಿ ತಮಗೆ ಕಳುಹಿಸಲು ನಿರ್ದೇಶಿತನಾಗಿರುತ್ತೇನೆ.

ತಮ್ಮ ವಿಶ್ವಾಸಿ,

11/12/18
(ಡಿ.ಎಸ್.ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ
(ಸೇವೆಗಳು ಬಿ & ಸಿ)

ಪ್ರತಿಯನ್ನು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ ಗ್ರಾಮೀಣಾವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ
3) ಸರ್ಕಾರದ ಅಧೀನ ಕಾರ್ಯದರ್ಶಿ ಸೇವೆಗಳು ಎ ಹಾಗೂ ಸಮನ್ವಯ ಶಾಖೆ.

ಕರ್ನಾಟಕ ವಿಧಾನಸಭೆ

ಸದಸ್ಯರ ಹೆಸರು	:	ಶ್ರೀ ಅಮರೇಗೌಡ ಲಿಂಗನಗೌಡ ಪಾಟೀಲ್ ಬಯ್ಯಾಪುರ್ (ಕುಷ್ಟಗಿ)
ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ	:	449
ಉತ್ತರ ದಿನಾಂಕ	:	13.12.2018

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಕುಷ್ಟಗಿ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಈ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ವಿವಿಧ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ ಸ್ಥಳೀಯ ಜಿಲ್ಲಾಡಳಿತದಿಂದ ಸರ್ಕಾರಕ್ಕೆ ಪ್ರಸ್ತಾವನೆಯು ಬಂದಿದೆಯೇ;	ಈ ತಾಲೂಕಿನಲ್ಲಿ ವ್ಯಾಪ್ತಿಯಲ್ಲಿ ಬರುವ ವಿವಿಧ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ ಸ್ಥಳೀಯ ಜಿಲ್ಲಾಡಳಿತದಿಂದ ಸರ್ಕಾರಕ್ಕೆ ಪ್ರಸ್ತಾವನೆಯು ಬಂದಿರುವುದಿಲ್ಲ.
ಇ)	ಹಾಗಿದ್ದಲ್ಲಿ, ಈ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲು ತಾಲ್ಲೂಕು ಆಡಳಿತ ಮತ್ತು ಜಿಲ್ಲಾಡಳಿತ ಯಾವ ಕ್ರಮಗಳನ್ನು ತೆಗೆದುಕೊಂಡಿದೆ?	ಪ್ರಸ್ತುತ ಕುಷ್ಟಗಿ ತಾಲ್ಲೂಕಿನಲ್ಲಿ ತೀವ್ರ ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳ ಪೈಕಿ ಗುಡ್ಡದ ದೇವಲಾಪುರ & ಹನುಮನಾಳ ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ. ಹಾಗೂ ಉಳಿದ 27 ಗ್ರಾಮಗಳಿಗೆ 33 ಖಾಸಗಿ ಕೊಳವೆ ಬಾವಿಗಳನ್ನು ಮಾಸಿಕ ಬಾಡಿಗೆ ಆಧಾರದ ಮೇಲೆ ಪಡೆದುಕೊಂಡು ನೀರನ್ನು ಪೂರೈಸಲಾಗುತ್ತಿದೆ. ಮುಂದುವರೆದು ಕುಷ್ಟಗಿ ತಾಲ್ಲೂಕನ್ನು ಬರಪಿಡಿತ ತಾಲ್ಲೂಕು ಎಂದು ಘೋಷಿಸಲಾಗಿದೆ ಬರ ಪರಿಹಾರಕ್ಕಾಗಿ ರೂ.50.00ಲಕ್ಷ ಅನುದಾನ ಅನುಮೋದನೆಯಾಗಿದ್ದು, 25.00ಲಕ್ಷ ಬಿಡುಗಡೆಯಾಗಿರುತ್ತದೆ. ಇದರಲ್ಲಿ 42 ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ. ಹಾಗೂ ಎಸ್.ಡಿ.ಆರ್.ಎಫ್. ಯೋಜನೆಯಲ್ಲಿ ರೂ.40.00ಲಕ್ಷ ಮೊತ್ತದ 67 ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ. ಮತ್ತು ಜಿಲ್ಲಾಧಿಕಾರಿಗಳ ಬರಪರಿಹಾರ ಯೋಜನೆಯಲ್ಲಿ ರೂ.29.00ಲಕ್ಷ ಬಿಡುಗಡೆಯಾಗಿದ್ದು, ಈ ಮೊತ್ತದಲ್ಲಿ 16 ಕೊಳವೆ ಬಾವಿಗಳ ಫ್ಲಶಿಂಗ್ ರೀಡ್ರಿಲ್ಲಿಂಗ್ ಮತ್ತು ಪೈಪ್‌ಲೈನ್ ಅಳವಡಿಸುವ ಕಾಮಗಾರಿಗಳನ್ನು ತಗೆದುಕೊಳ್ಳಲಾಗಿದೆ. 2018-19ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ 1961 ಕಾಮಗಾರಿಗಳನ್ನು ರೂ.130.41 ಲಕ್ಷಗಳಲ್ಲಿ ಅನುಷ್ಠಾನಗೊಳಿಸಲು ಅನುಮೋದಿಸಲಾಗಿದೆ.
ಈ)	ಜಿಲ್ಲಾಡಳಿತ ಕ್ರಮದ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯು ಬಂದಿದೆಯೇ; ಬೋರ್‌ವೆಲ್‌ಗಳನ್ನು ಕೊರೆಯಲು ಸರ್ಕಾರವು ಅನುಮತಿಯನ್ನು ನೀಡಲಾಗುವುದೇ?	ಜಿಲ್ಲಾಡಳಿತದಿಂದ ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ. ಅವಶ್ಯಕತೆಗೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಸೂಕ್ತ ನಿರ್ಣಯ ತೆಗೆದುಕೊಳ್ಳಲು ಜಿಲ್ಲಾಡಳಿತಕ್ಕೆ ಅವಕಾಶ ಕಲ್ಪಿಸಲಾಗಿದೆ.

ಸಂ:ಗ್ರಾಅಪ 76 ಗ್ರಾನೀಸ(3)18

(ಕೃಷ್ಣ ಬೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು

ಕರ್ನಾಟಕ ಸರ್ಕಾರ

ಸಂ: ಗ್ರಾಅಪ/88/ಗ್ರಾನೀಸ(3)/2018

ಕರ್ನಾಟಕ ಸರ್ಕಾರದ ಸಚಿವಾಲಯ
ಸುವರ್ಣ ಸೌಧ,
ಬೆಳಗಾವಿ, ದಿನಾಂಕ: 11.12.2018.

149 U S
13/12/18

ಇಂದ,
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಗ್ರಾಮಿಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ

ಇವರಿಗೆ,
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ,
ಸುವರ್ಣ ಸೌಧ ಬೆಳಗಾವಿ.

ವಿಷಯ: ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ನಾರಾಯನಗೌಡ (ಕೆ.ಆರ್. ಪೇಟೆ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 998 ಕ್ಕೆ ಉತ್ತರವನ್ನು ಒದಗಿಸುವ ಕುರಿತು.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಸಭಾ ಸದಸ್ಯರಾದ ಶ್ರೀ ನಾರಾಯನಗೌಡ (ಕೆ.ಆರ್. ಪೇಟೆ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 998 ಕ್ಕೆ ಉತ್ತರಗಳನ್ನು (350 ಪ್ರತಿಗಳನ್ನು) ಇದರೊಂದಿಗೆ ಲಗತ್ತಿಸಿ ತಮಗೆ ಕಳುಹಿಸಲು ನಿರ್ದೇಶಿತನಾಗಿರುತ್ತೇನೆ.

ತಮ್ಮ ವಿಶ್ವಾಸಿ,

11/12/18
(ಡಿ.ಎಸ್.ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮಿಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ
(ಸೇವೆಗಳು ಬಿ & ಸಿ)

ಪ್ರತಿಯನ್ನು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ ಗ್ರಾಮೀಣಾವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ
3) ಸರ್ಕಾರದ ಅಧೀನ ಕಾರ್ಯದರ್ಶಿ ಸೇವೆಗಳು ಎ ಹಾಗೂ ಸಮನ್ವಯ ಶಾಖೆ.

ಕರ್ನಾಟಕ ವಿಧಾನಸಭೆ

ಸದಸ್ಯರ ಹೆಸರು : ಶ್ರೀ ನಾರಾಯಣಗೌಡ (ಕೆ.ಆರ್.ಪೇಟೆ)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 998

ಉತ್ತರ ದಿನಾಂಕ : 13.12.2018

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಕೆ.ಆರ್.ಪೇಟೆ ತಾಲ್ಲೂಕು ಸಿಂಧಘಟ್ಟ ಹಾಗೂ 196 ಹಳ್ಳಿಗಳ ಮತ್ತು ಬಳ್ಳೇಕೆರೆ ಹಾಗೂ 116 ಗ್ರಾಮಗಳಿಗೆ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ ಅನುಮೋದನೆ ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ (ವಿವರ ಒದಗಿಸುವುದು);	ಕೆ.ಆರ್.ಪೇಟೆ ತಾಲ್ಲೂಕಿನ ಸಿಂದಘಟ್ಟ ಹಾಗೂ ಇತರೆ 195 ಮತ್ತು ಬಳ್ಳೇಕೆರೆ ಹಾಗೂ ಇತರೆ 113 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳನ್ನು DBOT ಆಧಾರದ ಮೇಲೆ ತೆಗೆದುಕೊಳ್ಳಲು ದಿನಾಂಕ:01.02.2017ರಂದು ನಡೆದ SLSSC ಸಮಿತಿಯಲ್ಲಿ ಅನುಮೋದನೆ ದೊರೆತಿದೆ. ಬಹುಗ್ರಾಮ ಯೋಜನೆಗಳನ್ನು **"ಜಲಧಾರೆ"** ಕಾರ್ಯಕ್ರಮದಡಿ ತೆಗೆದುಕೊಳ್ಳಲು ತೀರ್ಮಾನಿಸಲಾಗಿದೆ. ಈ ಕಾರ್ಯಕ್ರಮಕ್ಕೆ ಸಚಿವ ಸಂಪುಟದ ಅನುಮೋದನೆ ಪಡೆಯುವ ಪ್ರಕ್ರಿಯೆ ಜಾರಿಯಲ್ಲಿದೆ.
ಆ)	ಹಾಗಿದ್ದಲ್ಲಿ, ಈ ಯೋಜನೆಗೆ ತಗಲುವ ಅಂದಾಜು ವೆಚ್ಚವೆಷ್ಟು; ಈ ಯೋಜನೆಯನ್ನು ಯಾವಾಗಿನಿಂದ ಪ್ರಾರಂಭ ಮಾಡಲಾಗುವುದು;	1. ಕೆ.ಆರ್.ಪೇಟೆ ತಾಲ್ಲೂಕು ಸಿಂಧಘಟ್ಟ ಹಾಗೂ ಇತರೆ 195 ಗ್ರಾಮಗಳು ಅಂದಾಜು ಮೊತ್ತ ರೂ.21175.00ಲಕ್ಷಗಳು. 2. ಕೆ.ಆರ್.ಪೇಟೆ ತಾಲ್ಲೂಕು ಬಳ್ಳೇಕೆರೆ ಹಾಗೂ ಇತರೆ 113 ಗ್ರಾಮಗಳು ಅಂದಾಜು ಮೊತ್ತ ರೂ.11850.00ಲಕ್ಷಗಳು. **"ಜಲಧಾರೆ"** ಕಾರ್ಯಕ್ರಮ ಅನುಮೋದನೆಗೊಂಡ ನಂತರ ನಿಯಮಾನುಸಾರ ಕ್ರಮವಹಿಸಲಾಗುವುದು.
ಇ)	ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಕಾಲಮಿತಿ ನಿಗದಿಪಡಿಸಲಾಗಿದೆಯೇ (ಯೋಜನೆಯ ಸಂಪೂರ್ಣ ವಿವರವನ್ನು ಒದಗಿಸುವುದು)?	ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿ ದೊರೆತ ನಂತರ ಟೆಂಡರ್ ಆಹ್ವಾನಿಸಿ 30 ತಿಂಗಳ ಕಾಲಮಿತಿ ನಿಗದಿಪಡಿಸಲಾಗುವುದು.

ಸಂ:ಗ್ರಾಅಪ 88 ಗ್ರಾನೀಸ(3)18

(ಕೃಷ್ಣ ಬೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು

ಕರ್ನಾಟಕ ಸರ್ಕಾರ

ಸಂಖ್ಯೆ: ಆಕುಕ ೫೮೩ ಎಂಇಎಸ್ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 11 –12–2018

207
U/S
13/12/18

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ವೈದ್ಯಕೀಯ ಶಿಕ್ಷಣ)

ಇವರಿಗೆ:
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ/~~ಪರಿಷತ್ತು~~
ಸುವರ್ಣಸೌಧ,
ಬೆಳಗಾವಿ.

ಮಾನ್ಯರೆ,

ವಿಷಯ: ವಿಧಾನ ಸಭೆ/~~ಪರಿಷತ್~~ ಸದಸ್ಯರಾದ ಮಾನ್ಯ ಶ್ರೀ ಟಿ. ವೆಂಕಟರಮಣಯ್ಯ ರವರು ಮಂಡಿಸಿರುವ ಚುಕ್ಕೆ ~~ಗುರುತಿನ~~/ಗುರುತಿಲ್ಲದ ಪ್ರಶ್ನೆ ಸಂಖ್ಯೆ: ೫೨೧ ಕ್ಕೆ ಉತ್ತರಿಸುವ ಬಗ್ಗೆ.

* – *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಧಾನ ಸಭೆ/~~ಪರಿಷತ್ತಿನ~~ ಸದಸ್ಯರಾದ ಮಾನ್ಯ ಶ್ರೀ ಟಿ. ವೆಂಕಟರಮಣಯ್ಯ ರವರು ಮಂಡಿಸಿರುವ ಚುಕ್ಕೆ ಗುರುತಿನ/ಗುರುತಿಲ್ಲದ ಪ್ರಶ್ನೆ ಸಂಖ್ಯೆ: ೫೨೧ ಕ್ಕೆ ಉತ್ತರಗಳ ~~150~~/350 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ನಿಮ್ಮ ನಂಬುಗೆಯ,

(ವೈ.ಎಸ್.ದಳವಾಯಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

ಕರ್ನಾಟಕ ವಿಧಾನ ಸಭೆ

1.	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	521
2.	ಸದಸ್ಯರ ಹೆಸರು	:	ಶ್ರೀ. ಟಿ.ವೆಂಕಟರಮಣಯ್ಯ
3.	ಉತ್ತರಿಸಬೇಕಾದ ದಿನಾಂಕ	:	13.12.2018
4.	ಉತ್ತರಿಸಬೇಕಾದ ಸಚಿವರು	:	ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ಕ್ರ. ಸಂ.	ಪ್ರಶ್ನೆಗಳು	ಉತ್ತರಗಳು
(ಅ)	ದೊಡ್ಡಬಳ್ಳಾಪುರದಲ್ಲಿ ನರ್ಸಿಂಗ್ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಇಲ್ಲ
(ಆ)	ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಉದ್ಭವಿಸುವುದಿಲ್ಲ

ಸಂಖ್ಯೆ: ಆಕುಕ 582 ಎಂಪಿಎಸ್ 2018

(ಡಿ.ಕೆ.ಶಿವಕುಮಾರ್)
ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು

ಕರ್ನಾಟಕ ಸರ್ಕಾರ

ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ

ಸಂಖ್ಯೆ: ಸನೀಇ 127 ವಿಸವಿ 2018

ಕರ್ನಾಟಕ ಸರ್ಕಾರದ ಸಚಿವಾಲಯ
ಸುವರ್ಣ ವಿಧಾನಸೌಧ,
ಬೆಳಗಾವಿ, ದಿನಾಂಕ:13.12.2018

ಇಂದ:
ಸರ್ಕಾರದ ಕಾರ್ಯದರ್ಶಿ
ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ
ಸುವರ್ಣ ವಿಧಾನಸೌಧ,
ಬೆಳಗಾವಿ

ಇವರಿಗೆ
ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಸಭೆ ಸಚಿವಾಲಯ
ಸುವರ್ಣ ವಿಧಾನಸೌಧ,
ಬೆಳಗಾವಿ.

ಮಾನ್ಯರೆ

ವಿಷಯ: ಡಾ॥ ಉಮೇಶ ಜಿ ಜಾಧವ, ಮಾನ್ಯ ವಿಧಾನ ಸಭೆ ಸದಸ್ಯರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1762ಕ್ಕೆ ಉತ್ತರಿಸುವ ಕುರಿತು.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಡಾ॥ ಉಮೇಶ ಜಿ ಜಾಧವ, ಮಾನ್ಯ ವಿಧಾನ ಸಭೆ ಸದಸ್ಯರು ಮಂಡಿಸಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:1762ರ ಉತ್ತರದ 350 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿಕೊಡಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ

(ಬಿ. ಬಾಲಸುಬ್ರಮಣ್ಯ) 13/12/18
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ